**ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಶಾಹಾಪೂರ**

**ಸಿ.ಸಿ ನಂಃ 1801/ 2023**

| | | |
|---|---|---|
| ಸಾಕ್ಷಿಯ ಹೆಸರುಃ | ನಾಗರಾಜ | ಪ್ರಾಸಾಃ 01 |
| ತಂದೆ/ಗಂಡನ ಹೆಸರುಃ | ಯಮನಪ್ಪ | ಚಾಸಾಃ 01 |
| ವಯಸ್ಸುಃ | 20 ವರ್ಷ | ದಿಃ 29-12-2023 |
| ಉದ್ಯೋಗಃ | ಕೂಲಿ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ದರ್ಶನಾಪೂರ | |

**ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :**

ಚಾಸಾ 4, 5 ಮತ್ತು ಆರೋಪಿತನ ಪರಿಚಯ ಇರುತ್ತದೆ. ನನ್ನ ಮತ್ತು ಆರೋಪಿತನ ನಡುವೆ ಬಾಯಿ ಮಾತಿನ ಜಗಳವಾಗಿತ್ತು. ಇದನ್ನು ಹೊರತುಪಡಿಸಿ ಬೇರೆ ಏನೂ ಘಟನೆ ನಡೆದಿರುವುದಿಲ್ಲ. ಘಟನೆಯ ಬಗ್ಗೆ ನಾನು ಪೋಲಿಸರ ಮುಂದೆ ಯಾವುದೇ ಫಿರ್ಯಾದಿಯನ್ನು ನೀಡಿರುವುದಿಲ್ಲ.

**(ಈ ಸಾಕ್ಷಿಯು ಈ ಹಿಂದೆ ತನಿಖಾಧಿಕಾರಿಯವರ ಮುಂದೆ ನೀಡಿದ ಹೇಳಿಕೆಗೆ ವಿರೋದಾತ್ಮಕವಾಗಿ ಸಾಕ್ಷ್ಯ ನುಡಿದಿರುವುದರಿಂದ ಪ್ರತಿಕೂಲ ಪಕ್ಷಕಾರರು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅನುಮತಿ ನೀಡಬೇಕೆಂದು ಸಹಾಯಕ ಸರಕಾರಿ ಅಭಿಯೋಜಕರು ಭಿನವಿಸಿರುತ್ತಾರೆ. ಈ ಪ್ರಕರಣದ ಕಾಗದ ಪತ್ರಗಳನ್ನು ಪರಿಶೀಲಿಸಿದಾಗ ಸಾಕ್ಷಿಯು ತನ್ನ ಹಿಂದಿನ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಪಕ್ಷಕಾರನು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾಗ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅಭಿಯೋಜನೆಗೆ ಅನುಮತಿ ನೀಡುವುದು ಸೂಕ್ತ ಮತ್ತು ನ್ಯಾಯೋಚಿತ ಎಂದು ಮನಗೊಂಡು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು : ಮಾನ್ಯ ಸ.ಸ.ಅ. ರವರಿಂದಃ**

ದಿಃ 8.2.2023 ರಂದು ಬೆಃ 7.30 ಗಂಟೆಗೆ ನಾನು ಚಾಸಾ 4 ಹಾಗೂ 5 ರವರು ನೀರು ಬರುವ ವಿಚಾರವಾಗಿ ಕೆನಾಲ ಹತ್ತಿರ ಹೊಗಿ ನೋಡಿದಾಗ ಮೇಲಿನ ಹೊಲದಲ್ಲಿ ಆರೋಪಿತನು ನೀರು ಬರುವ ವಿಚಾರವಾಗಿ ನಮೊಂದಿಗೆ ಜಗಳ ತೆಗೆದಿರುತ್ತಾನೆ ಎಂದರೆ ಸರಿಯಲ್ಲ. ಆರೋಪಿತನು ನನಗೆ ಕಟ್ಟಿಗೆಯಿಂದ ಹೊಡೆದು ಗಾಯಗೊಳಿಸಿ ಅವಾಚ್ಯವಾಗಿ ಬೈದಿರುತ್ತಾನೆ ಎಂದರೆ ಸರಿಯಲ್ಲ. ಜೀವ ಬೆದರಿಕೆ ಹಾಕಿರುತ್ತಾನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಫಿರ್ಯಾದಿಯನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಆರೋಪಿತನಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು  ಆರೋಪಿತರ ಪರಃ  ಶ್ರೀ ಎಂ.ಎನ್.ಪಿ.  ವಕೀಲರವರಿಂದಃ</u>**

ಯಾವುದೇ ಪಾಟೀ ಸವಾಲು ಇರುವುದಿಲ್ಲ.

**ಮರುವಿಚಾರಣೆ : ಇರುವುದಿಲ್ಲ.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ  ಜೆಎಂಎಫ್‌ಸಿ ನ್ಯಾಯಾಧೀಶರು**
**ಶಾಹಾಪೂರ**